ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 20–12–2019

# ಪತ್ರಿಕಾ ಆಮಂತ್ರಣ

1. ಟಿ. ಮಾರಪ್ಪ ಸ್ಮಾರಕ ಟ್ರಸ್ಟ್ (ರಿ) ಬೆಂಗಳೂರು ಮತ್ತು ಕರ್ನಾಟಕ ಅರಣ್ಯ ಇಲಾಖೆ ವತಿಯಿಂದ ವನ್ಯಜೀವಿ ಸಂರಕ್ಷಣೆ ಹಾಗೂ ಅರಣ್ಯ ರಕ್ಷಣೆಯಲ್ಲಿ ವಿಶೇಷ ಸೇವೆ ಸಲ್ಲಿಸಿರುವ ಅರಣ್ಯ ನೌಕರರಿಗೆ ಪ್ರಶಸ್ತಿ ಪ್ರದಾನ ಸಮಾರಂಭ:

ಪ್ರಶಸ್ತಿ ಪ್ರದಾನ:

ಡಾ.ಸಿ.ಎನ್.ಅಶ್ವತ್ಥನಾರಾಯಣ,
ಉಪ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಮುಖ್ಯ ಅತಿಥಿ:

ಸಿ. ಸಿ. ಪಾಟೀಲ್
ಅರಣ್ಯ, ಪರಿಸರ ಮತ್ತು ಜೀವಿ ಪರಿಸ್ಥಿತಿ ಇಲಾಖೆಯ ಸಚಿವರು

ವಿಶೇಷ ಅತಿಥಿ:

ಸಂದೀಪ್ ದವೆ,
ಅಪರ ಮುಖ್ಯ ಕಾರ್ಯದರ್ಶಿ
ಅರಣ್ಯ, ಪರಿಸರ ಮತ್ತು ಜೀವಿ ಪರಿಸ್ಥಿತಿ ಇಲಾಖೆ

ಅಧ್ಯಕ್ಷತೆ

ಆರ್. ಎಂ. ಪಾಲಣ್ಣ ಬಿ.
ಅಧ್ಯಕ್ಷರು, ಮಾರಪ್ಪ ಸ್ಮಾರಕ ಟ್ರಸ್ಟ್ ಬೆಂಗಳೂರು

ದಿನಾಂಕ: 21–12–2019 ಶನಿವಾರ ಸಮಯ: ಮಧ್ಯಾಹ್ನ 3.30 ಗಂಟೆಗೆ

ಸ್ಥಳ: ಸಮ್ಮೇಳನ ಸಭಾಂಗಣ, 8ನೇ ಮಹಡಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು – 560 001

2. ಕನ್ನಡ ಮತ್ತು ಸಂಸ್ಕೃತಿ ಇಲಾಖಾವತಿಯಿಂದ ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮ:

<u>ತಿಂಗಳ ಅತಿಥಿ:</u>

ಶ್ರೀ ಅರಳಿ ನಾಗರಾಜ,
ವಿಶ್ರಾಂತ ನ್ಯಾಯಾಧೀಶರು,
ಕರ್ನಾಟಕ ಉಚ್ಚ ನ್ಯಾಯಾಲಯ.

ದಿನಾಂಕ: 21–12–2019 ಶನಿವಾರ ಸಮಯ: ಸಂಜೆ 4.00 ಗಂಟೆಗೆ
ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ. ಸಿ. ರಸ್ತೆ, ಬೆಂಗಳೂರು.

## <u>ಪತ್ರಿಕಾ ಪ್ರಕಟಣೆ</u>

## <u>ಡಾ. ಎಂ.ಎ. ಸಲೀಂ ಅವರ ಪುಸ್ತಕ</u>

## <u>“ Traffice Management in Metropolitan Cities” ಬಿಡುಗಡೆ</u>

ಬೆಂಗಳೂರು, ಡಿಸೆಂಬರ್ 20 (ಕರ್ನಾಟಕ ವಾರ್ತೆ)

ಪೊಲೀಸ್ ಇಲಾಖೆಯ ಡಾ. ಎಂ.ಎ. ಸಲೀಂ ಅವರು ತಮ್ಮ ಉನ್ನತ ಶಿಕ್ಷಣ ಡಾಕ್ಟರೇಟ್ ಪದವಿಗಾಗಿ ರಚಿಸಿದ ಮಹಾಪ್ರಬಂಧ “ Traffice Management in Metropolitan Cities” ಪುಸ್ತಕ ರೂಪದಲ್ಲಿ ಪ್ರಕಟಿಸಿರುವುದು ಟ್ರಾಫಿಕ್ ಪೋಲಿಸರ ಮಾರ್ಗದರ್ಶಕ ಗ್ರಂಥವಿದ್ದಂತೆ ಎಂದು ಮಹಾನಿರ್ದೇಶಕರು ಹಾಗೂ ಪೊಲೀಸ್ ಮಹಾನಿರೀಕ್ಷಕರಾದ ಶ್ರೀಮತಿ ನೀಲಮಣಿ ಎನ್. ರಾಜು ಅವರು ಹೇಳಿದರು.

ಇಂದು ನಗರದ ಸಂಚಾರ ನಿರ್ವಹಣಾ ಕೇಂದ್ರ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಡಾ. ಎಂ.ಎ. ಸಲೀಂ ಅವರ “ Traffice Management in Metropolitan Cities” ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ಅವರು ಸಲೀಂ ಅವರು ಸ್ವತ: ಟ್ರಾಫಿಕ್ ಪೋಲೀಸ್ ವಿಭಾಗದಲ್ಲಿ ಉನ್ನತ ಅಧಿಕಾರಿಯಾಗಿ ಕಾರ್ಯನಿರ್ವಹಿಸಿರುವ ಅನುಭವ ಹಾಗೂ ಟ್ರಾಫಿಕ್ ಸಮಸ್ಯೆಗಳ ಕುರಿತು ಈಗಾಗಲೇ ಇರುವ ಇತರೆ ಪುಸ್ತಕಗಳು ಮತ್ತು ಕಾನೂನುಗಳ ಜ್ಞಾನವನ್ನು ಈ ಪುಸ್ತಕದಲ್ಲಿ ನಮೋದಿಸಿದ್ದಾರೆ.

ಪೊಲೀಸ್ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರತಿಯೊಬ್ಬರೂ ಈ ಪುಸ್ತಕವನ್ನು ಓದಬೇಕು ಹಾಗೂ ಟ್ರಾಫಿಕ್ ಪೋಲೀಸರಿಗೆ ಇದೊಂದು ಮಾರ್ಗದರ್ಶಕ ಗ್ರಂಥ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಪುಸ್ತಕ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡ ನಿವೃತ್ತ ಮಹಾನಿರ್ದೇಶಕರು ಹಾಗೂ ಪೊಲೀಸ್ ಮಹಾನಿರೀಕ್ಷಕರಾಗಿದ್ದ ಡಾ. ಅಜಯ್ ಕುಮಾರ್ ಸಿಂಹ ಅವರು ಮಾತನಾಡಿ ಪಿ.ಹೆಚ್.ಡಿ. ಪದವಿಗಾಗಿ ರಚಿಸಿದ್ದ ಮಹಾ ಪ್ರಬಂಧವನ್ನು ಪುಸ್ತಕ ರೂಪದಲ್ಲಿ ಪ್ರಕಟಿಸುವುದು ಅತ್ಯಂತ ಸವಾಲಿನ ಕೆಲಸವಾಗಿದ್ದು ಡಾ. ಸಲೀಂ ಅವರು ಈ ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಿದ್ದಾರೆ ಎಂಬುದು ಪುಸ್ತಕ ಓದಿದ ನಂತರ ತಿಳಿಯಿತು ಎಂದು ಹೇಳಿದರು.

ಜಗತ್ತಿನಲ್ಲಿ ಟೆರರಿಸಂ ಬಿಟ್ಟರೆ ಟ್ರಾಫಿಕ್ ಅತ್ಯಂತ ಸೂಕ್ಷ್ಮ ಸಂಗತಿಯಾಗಿದ್ದು ಎಲ್ಲಾ ದೇಶಗಳು ಒಂದಲ್ಲ ಒಂದು ರೀತಿಯಲ್ಲಿ ಈ ಎರಡು ಸಮಸ್ಯೆಗಳನ್ನು ಎದುರಿಸುತ್ತಿವೆ. ಇಂತಹ ಕ್ಲಿಷ್ಟಕರ ಟ್ರಾಫಿಕ್ ಸಮಸ್ಯೆಯನ್ನು ಅಧ್ಯಯನ ಮಾಡಿ ಪರಿಹಾರಗಳನ್ನು ಸಹ ಸೂಚಿಸಿರುವ ಈ ಪುಸ್ತಕ ಒಟ್ಟು 12 ಅಧ್ಯಯನಗಳನ್ನೊಳಗೊಂಡಿದ್ದು ಅತ್ಯಂತ ಸರಳವಾಗಿ ಓದಿಸಿಕೊಂಡು ಹೋಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಭಾಸ್ಕರ್ ರಾವ್, ಡಿಸಿಪಿ ಡಾ. ಬಿ. ಆರ್. ರವಿಕಾಂತೇ ಗೌಡ ಸೇರಿದಂತೆ ಅನೇಕ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಡಿಸೆಂಬರ್ 22 ರಂದು
## ನೂತನ ಶಾಸಕರಿಗೆ ಪ್ರಮಾಣ ವಚನ

ಬೆಂಗಳೂರು, ಡಿಸೆಂಬರ್ 20 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನಸಭೆಗೆ ಇತ್ತೀಚೆಗೆ ನಡೆದ ಉಪಚುನಾವಣೆಯಲ್ಲಿ ಚುನಾಯಿತರಾಗಿರುವ ನೂತನ ಶಾಸಕರ ಪ್ರಮಾಣ ವಚನ ಕಾರ್ಯಕ್ರಮವನ್ನು ಡಿಸೆಂಬರ್ 22 ಭಾನುವಾರದಂದು ಬೆಳಿಗ್ಗೆ 10.00 ಗಂಟೆಗೆ ವಿಧಾನಸೌಧದಲ್ಲಿರುವ ಬ್ಯಾಂಕ್ವೆಟ್ ಹಾಲ್‌ನಲ್ಲಿ ಏರ್ಪಡಿಸಲಾಗಿದೆ ಎಂದು ಕರ್ನಾಟಕ ವಿಧಾನಸಭೆಯ ಸಚಿವಾಲಯ ಪ್ರಕಟಣೆ ತಿಳಿಸಿದೆ.

## ಪ್ರವೇಶಾತಿ ಪ್ರಾರಂಭ

ಬೆಂಗಳೂರು, ಡಿಸೆಂಬರ್ 20 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಮೈಸೂರು ಇದರ 2019-20 ನೇ ಜನವರಿ ಆವೃತ್ತಿಯ ಪ್ರವೇಶಾತಿಗೆ ಅಧಿಸೂಚನೆ ಪ್ರಕಟಿಸಲಾಗಿದ್ದು, ಬಿ.ಎ, ಬಿ.ಕಾಂ., ಬಿ.ಎಡ್, ಎಂ.ಎ., ಎಂ.ಕಾಂ., ಎಂ.ಎಸ್ಸಿ., ಎಂ.ಬಿ.ಎ, ಎಂ.ಲಿಬ್, ಪಿ.ಜಿ. ಡಿಪ್ಲೊಮಾ ಮತ್ತು ಡಿಪ್ಲೊಮಾ ಹಾಗೂ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಡಿಸೆಂಬರ್ 16 ರಿಂದ ಜನವರಿ 31 ರವರೆಗೆ ಪ್ರವೇಶಾತಿಗೆ ಅವಕಾಶವಿದೆ.

ಹೆಚ್ಚಿನ ಮಾಹಿತಿಗೆ ವಿಶ್ವವಿದ್ಯಾನಿಲಯ ವೆಬ್‌ಸೈಟ್ www.ksoumysuru.ac.in ಹಾಗೂ ಕರಾಮುವಿ ಬೆಂಗಳೂರು -3 ಪ್ರಾದೇಶಿಕ ಕೇಂದ್ರ ಕಚೇರಿ, ಕೋಗಿಲು ಜಂಕ್ಷನ್, ಯಲಹಂಕ, ಬೆಂಗಳೂರು ಮೊ. 9880526439, 9019526439 ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಲು ಪ್ರಾದೇಶಿಕ ನಿರ್ದೇಶಕರಾದ ಹೆಚ್.ಎಸ್. ರೋಹಿತ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರಡು ಮತದಾರರ ಪಟ್ಟಿ ಪ್ರಕಟ

ಬೆಂಗಳೂರು, ಡಿಸೆಂಬರ್ 20 (ಕರ್ನಾಟಕ ವಾರ್ತೆ)

ಭಾರತ ಚುನಾವಣಾ ಆಯೋಗದ ನಿರ್ದೇಶಗಳನ್ವಯ ಕರ್ನಾಟಕ ರಾಜ್ಯದ 224 ವಿಧಾನಸಭಾ ಕ್ಷೇತ್ರ ಮತದಾರರ ಪಟ್ಟಿಗಳನ್ನು ಪರಿಷ್ಕರಿಸಲಾಗುತ್ತಿದ್ದು, ಇಂದು ಎಲ್ಲಾ ಕ್ಷೇತ್ರಗಳಲ್ಲಿ ಕರಡು ಮತದಾರರ ಪಟ್ಟಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿ, ಮತದಾರರ ನೋಂದಣಾಧಿಕಾರಿಗಳ ಕಚೇರಿ, ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿ ಹಾಗೂ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಮತಗಟ್ಟೆಗಳಲ್ಲಿ ಸಾರ್ವಜನಿಕರ ತಿಳುವಳಿಕೆಗಾಗಿ ಪ್ರಕಟಪಡಿಸಲಾಗಿದೆ. ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ವೇಳಾ ಪಟ್ಟಿ ಇಂತಿದೆ.

ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸುವ ದಿನಾಂಕ: 16-12-2019, ಹೆಸರು ಸೇರ್ಪಡೆ, ತಿದ್ದುಪಡಿ ಮಾಡಲು ಮತ್ತು ತೆಗದು ಹಾಕಲು ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸುವ ಅವಧಿ 16-12-2019 ರಿಂದ 15-01-2020ರವರೆಗೆ, ಹೆಸರು ಸೇರ್ಪಡೆ, ತಿದ್ದುಪಡಿ ಮಾಡಲು ಮತ್ತು ತೆಗದು ಹಾಕಲು ಸ್ವೀಕೃತವಾಗಿರುವ ಅರ್ಜಿಗಳನ್ನು ಇತ್ಯರ್ಥಗೊಳಿಸುವ ಕೊನೆಯ ದಿನಾಂಕ: 27-01-2020, ಡೇಟಾ ಬೇಸ್ ಕಾಲೋಚಿತಗೊಳಿಸಿ, ಪೂರಕ ಪಟ್ಟಿಗಳ ಮುದ್ರಣದ ದಿನಾಂಕ: 04-02-2020. ಭಾವಚಿತ್ರವಿರುವ ಮತದಾರರ ಪಟ್ಟಿಗಳ ಅಂತಿಮ ಪ್ರಕಟಣೆಯ ದಿನಾಂಕ: 07-02-2020.

ಈ ಅವಧಿಯಲ್ಲಿ ಮತದಾರರ ಪಟ್ಟಿಗಳ ಪರಿಷ್ಕರಣೆಯನ್ನು ಕೈಗೊಳ್ಳುತ್ತಿದ್ದು, ಈ ಕೆಳಗಿನ ಅಂಶಗಳ ಬಗ್ಗೆ ರಾಜಕೀಯ ಪಕ್ಷಗಳ ಸಹಕಾರವನ್ನು ಕೋರಿದೆ.

1. ವಿಧಾನಸಭಾ ಕ್ಷೇತ್ರಗಳ ಮತದಾರರ ಪಟ್ಟಿಯನ್ನು ಮುಖ್ಯ ಚುನಾವಣಾಧಿಕಾರಿಗಳು, ಕರ್ನಾಟಕ ರಾಜ್ಯ ಇವರ ಅಧಿಕೃತ ಜಾಲತಾಣದಲ್ಲಿ [www.ceokarnataka.kar.nic.in](http://www.ceokarnataka.kar.nic.in) ನಲ್ಲಿ ಪಿ.ಡಿ.ಎಫ್. ಆವೃತ್ತಿಯನ್ನು ಹಾಕಲಾಗಿದ್ದು, ಸಾರ್ವಜನಿಕರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾದ ಬಗ್ಗೆ ಪರಿಶೀಲಿಸಿ ಸರಿಯದ ಹಾಗೂ ಹೆಸರನ್ನು ನಮೂದುಗಳೊಂದಿಗೆ ನೋಂದಾಯಿಸಿದ ಬಗ್ಗೆ ಖಚಿತಪಡಿಸಿಕೊಳ್ಳುವುದು.
2. <u>ಅರ್ಜಿ ಸಲ್ಲಿಸುವ ವಿಧಾನ ಪ್ರತಿ:</u>
   ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ನೇಮಕವಾಗಿರುವ ಅಧಿಸೂಚಿತ ಮತದರರ ನೋಂದಣಾಧಿಕಾರಿಗಳು/ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ನಿಗದಿತ ನಮೂನೆಗಳಲ್ಲಿ ಅವಶ್ಯಕ ದಾಖಲೆಗಳೊಂದಿಗೆ ಅರ್ಜಿಗಳನ್ನು ಸಲ್ಲಿಸಬೇಕು.
   ಅ. ನಮೂನೆ–6– ಹೆಸರು ಸೇರ್ಪಡೆ
   ಆ. ನಮೂನೆ – 7 – ಹೆಸರು ತೆಗೆದುಹಾಕುವಿಕೆ.
   ಇ. ನಮೂನೆ 8– ಮುದ್ರಿತ ನಮೂದುಗಳಲ್ಲಿ ತಿದ್ದುಪಡಿಗಳು
   ಈ. ನಮೂನೆ 8ಂ ಅದೇ ವಿಧಾನಸಭಾ ಕ್ಷೇತ್ರದಲ್ಲಿ ಒಂದು ಮತಗಟ್ಟೆಯ ವ್ಯಾಪ್ತಿಯಿಂದ ಇನ್ನೊಂದು ಮತಗಟ್ಟೆಗೆ ಹೆಸರು ವರ್ಗಾವಣೆ (ಖಿಡಿಚಿಟಿಠಿಥಿಣುಡಿಟಿ)

ಮತದಾರರ ಪಟ್ಟಿಗಳ ಪರಿಷ್ಕರಣೆಯ ವೇಳಾಪಟ್ಟಿಯ ಬಗ್ಗೆ ಸಾಕಷ್ಟು ಪ್ರಚಾರ ನೀಡಲಾಗಿದ್ದು, ರಾಜ್ಯ ಮಟ್ಟದಲ್ಲಿ ಚುನಾವಣಾಧಿಕಾರಿಗಳು ಕರ್ನಾಟಕ ರವರು ಪತ್ರಿಕಾಗೋಷ್ಠಿ ನಡೆಸಿ ಸವಿಸ್ತಾರವಾಗಿ ವಿವರಿಸಿರುತ್ತಾರೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯಾ ತಹಶೀಲ್ದಾರರು ಮಾಧ್ಯಮದ ಪ್ರಚಾರ ಕೈಗೊಳ್ಳುತ್ತಾರೆ. ಅಲ್ಲದೇ, ಅವಶ್ಯಕ ಎಲ್ಲಾ ಅರ್ಜಿ ನಮೂನೆಗಳು ಆಯಾ ಮತದಾರರ ನೋಂದಣಾಧಿಕಾರಿಗಳ ಕಾರ್ಯಾಲಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದ್ದು, ಸಾರ್ವಜನಿಕರು ಉಚಿತವಾಗಿ ನೀಡುವ ಅರ್ಜಿಗಳನ್ನು ಅವಶ್ಯಕತೆಗೆ ಅನುಸಾರವಾಗಿ ಪಡೆಯಲು ಕೋರಲಾಗಿದೆ.

<u>ಮತದಾರರ ಸೇರ್ಪಡೆ, ತಿದ್ದುಪಡಿ ಹಾಗೂ ತೆಗೆದುಹಾಕುವಿಕೆ:</u>

1. ಎಲ್ಲಾ ಅರ್ಹ ವ್ಯಕ್ತಿಗಳನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಬೇಕಾಗಿದ್ದು, ಈ ದಿಶೆಯಲ್ಲಿ ವಿಶೇಷವಾಗಿ 18–19 ವಯಸ್ಸಿನ ಯುವಕ/ಯುವತಿಯರ ಹೆಸರುಗಳನ್ನು ಪ್ರತಿಶತ 100% ರಂತೆ ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ಹೆಚ್ಚಿನ ಪ್ರಚಾರ ಕೈಗೊಳ್ಳಬೇಕಾಗುತ್ತದೆ.
2. ಅದರಂತೆ, ಮತದಾರರ ಪಟ್ಟಿಯಲ್ಲಿ ನೋಂದಾಗಿರುವ ಮತದಾರರು ಮೃತರಾಗಿದ್ದಲ್ಲಿ/ವಲಸೆ ಹೋಗಿದ್ದಲ್ಲಿ/ಎರಡು ಕಡೆ ಹೆಸರುಗಳು ಇದ್ದಲ್ಲಿ ಅಂತಹ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲು ಕ್ರಮ ಜರುಗಿಸಬೇಕಾಗುತ್ತದೆ.
3. ನೋಂದಾವಣೆ ಆದ ಮತದಾರರ ವಿವರಗಳು/ನಮೂದುಗಳು ತಪ್ಪಾಗಿದ್ದಲ್ಲಿ ಅವುಗಳನ್ನು ತಿದ್ದುಪಡಿ ಮೂಲಕ ಸರಪಡಿಸುವುದು.

ಎಲ್ಲಾ ಅರ್ಹ ಮತದಾರರಿಗೆ ಗುರುತಿನ ಚೀಟಿ:

ಪ್ರಜಾ ಪ್ರಾತಿನಿಧ್ಯ ಕಾಯ್ದೆ ಹಾಗೂ ಮತದಾರರ ನೋಂದಣಿ ನಿಯಮಾವಳಿಗಳನ್ವಯ ಎಲ್ಲಾ ಅರ್ಹ ಮತದಾರರಿಗೆ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ನೀಡಲಾಗಿದ್ದು, ಪ್ರಸ್ತುತ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ ಅರ್ಹತಾ ದಿನಾಂಕ: 01-01-2020 ರಡಿ ಹೊಸದಾಗಿ ಸೇರ್ಪಡೆಯಾಗುವ ಎಲ್ಲಾ ಮತದಾರರಿಗೆ ಭಾವಚಿತ್ರವಿರುವ ಗುರುತಿನ ಚೀಟಿಗಳನ್ನು ನೀಡಲಾಗುವುದು.

ಮುಂಬರುವ ಚುನಾವಣೆಗಳ ನಿಮಿತ್ಯ ಎಲ್ಲಾ ಅರ್ಹ ಮತದಾರರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲು ಹಾಗೂ ದೋಷರಹಿತ ಮತದರರ ಪಟ್ಟಿಯನ್ನು ತಯಾರಿಸಲು ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಅವಶ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಮತದಾರರ ಪಟ್ಟಿಗಳು/ಮತದಾರರ ಗುರುತಿನ ಚೀಟಿ ಇತ್ಯಾದಿ ವಿರಗಳ ಮಾಹಿತಿ ಅವಶ್ಯವಿದ್ದಲ್ಲಿ ಸಂಬಂಧಿಸಿದ ಜಿಲ್ಲಾ ಚುನಾವಣಾಧಿಕಾರಿಗಳು/ಮತದಾರ ನೋಂದಣಾಧಿಕಾರಿಗಳು/ಸಹಾಯಕ ಮತದಾರರ ನೋಂದಣಾಧಿಕಾರಿಗಳನ್ನು ಸಹಾಯವಾಣಿ ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಮುಖ್ಯ ಚುನಾವಣಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

# ಗ್ರಾಹಕ ಸಂವಾದ ಸಭೆ

ಬೆಂಗಳೂರು, ಡಿಸೆಂಬರ್ 20 (ಕರ್ನಾಟಕ ವಾರ್ತೆ)

ಬೆವಿಕಂ ವ್ಯಾಪ್ತಿಗೆ ಒಳಪಡುವ ಎಲ್ಲಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3:00 ರಿಂದ ಸಂಜೆ 5:30 ರವರಗೆ ಗ್ರಾಹಕ ಸಂವಾದ ಸಭೆಗಳನ್ನು ನಡೆಸಲಾಗುತ್ತಿದೆ. ಸದರಿ ಸಭೆಯಲ್ಲಿ ಗ್ರಾಹಕರು ಪಾಲ್ಗೊಂಡು ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ.

ಅದರನ್ವಯ, ಈ ತಿಂಗಳ ಗ್ರಾಹಕ ಸಂವಾದ ಸಭೆ ದಿನಾಂಕ 21.12.2019 ರಂದು ಬೆವಿಕಂನ ಎಲ್ಲಾ ಉಪವಿಭಾಗಗಳಲ್ಲಿ ನಡೆಯಲಿದ್ದು, ಗ್ರಾಹಕರು ಈ ಸಭೆಯ ಸದುಪಯೋಗ ಪಡೆಯಲು ಬೆವಿಕಂ ಪ್ರಕಟನೆ ತಿಳಿಸಿದೆ.

# Customer Interaction Meeting (CIM)

**Bengaluru, December 20 (Karnataka Information)**

Customer Interaction Meetings (CIM) are being conducted at all Sub Divisions of BESCOM on third Saturday of every month from 3.00pm to 5.30pm. In the said Meeting (CIM), Customers are requested to get your electricity related issues resolved having one to one interaction with concerned BESCOM official.

In this regard the scheduled CIM for the month of December is scheduled on 21.12.2019. In this regard all the esteemed consumers are requested to participate and make use of the opportunity in redressal of complaints.

## [illegible]

[illegible]

[illegible]

